**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 154/2015**

| | | | |
|---|---|---|---|
| ಸಾಕ್ಷಿದಾರರ ಹೆಸರು | | **ಸಿದ್ದಯ್ಯ** | ಪ್ರಾಸಾಃ 1 |
| ತಂದೆಯ/ಗಂಡನ ಹೆಸರು | | ಲೇಃ ಪಹಣಿ ಮಾದಯ್ಯ | ಚಾಸಾಃ 2 |
| ವಯಸ್ಸು | | 83 ವರ್ಷ | |
| ಕೆಲಸ | | ನಿರುದ್ಯೋಗಿ | |
| ವಾಸ | | ಮೂಡಹಳ್ಳಿ ಗ್ರಾಮ | ದಿಃ 16/06/2025 |

**ಸಾ ಪ್ರ ಬೋ ಃ**

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಚಾಸಾ 1 ರಿಂದ 4 ರವರ ಪರಿಚಯ ಇದೆ. ಈ ಪ್ರಕರಣದ ವಿಚಾರ ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿನಾಂಕ 22.02.2014 ರಂದು ಪೊಲೀಸರು ಪ್ರಕರಣದ ವಿಚಾರ ತಿಳಿಸಿ ಮಹಜರ್ ಗೆ ಸಹಕರಿಸುವಂತೆ ಕೇಳಿಕೊಂಡ ಮೇರೆಗೆ ಅದಕ್ಕೆ ನಾನು ಒಪ್ಪಿದ್ದು, ನನ್ನ ಹಾಗೂ ಚಾಸಾ 4 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿದ್ದು ಸದರಿ ಮಹಜರ್ ಗೆ ನಾನು ಸ್ಥಳದಲ್ಲೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮಹಜರ್ ಅನ್ನು ಪೊಲೀಸರು ಬೆಳಿಗ್ಗೆ 10 ಗಂಟೆಯಿಂದ 10.45 ರವರೆಗೆ ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯವಾಗಲೇಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು:</u>** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**